# ಜೂ.2ಕ್ಕೆ ತುಂಗಭದ್ರಾ ಜಲಾಶಯದ ಹೂಳಿನ ಜಾತ್ರೆ

■ ಉದಯವಾಣಿ ಸಮಾಚಾರ



ಹೊಸಪೇಟೆ: ತುಂಗಭದ್ರಾ ಜಲಾಶಯದ ಹೂಳೆತ್ತಲು ಜೂ.2ರಂದು ವಿಜಯನಗರ ಹಾಗೂ ಬಳ್ಳಾರಿ ಜಿಲ್ಲೆಗಳ ರೈತರು ಮುಂದಾಗಿದ್ದಾರೆ ಎಂದು ತುಂಗಭದ್ರಾ ರೈತ ಸಂಘದ ರಾಜ್ಯಾಧ್ಯಕ್ಷ ದರೂರು ಡಾ.ಪುರುಷೋತ್ತಮ ಗೌಡ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತುಂಗಭದ್ರಾ ಜಲಾಶಯದಲ್ಲಿ ಸಂಗ್ರಹವಾಗಿರುವ 33 ಟಿಎಂಸಿ ಹೂಳೆತ್ತಲು ಸರ್ಕಾರ ಮನಸ್ಸು ಮಾಡುತ್ತಿಲ್ಲ, ಹೂಳು ತುಂಬಿರುವುದರಿಂದ ಕೆಳಭಾಗದ ರೈತರ ಕೃಷಿ ಭೂಮಿಗಳಿಗೆ ಸಮರ್ಪಕ ನೀರು ಸಿಗದೆ, ಪ್ರತಿವರ್ಷವೂ ರೈತರು ನಷ್ಟಕ್ಕೆ ಗುರಿಯಾಗುತ್ತಿದ್ದಾರೆ. ಆದ್ದರಿಂದ ನೂರಾರು ರೈತರು ಜಲಾಶಯದ ಹಿನ್ನೀರಿನ ಪ್ರದೇಶದಲ್ಲಿ ಹೂಳೆತ್ತಲು ಮುಂದಾಗಿದ್ದಾರೆ. 2017ರಲ್ಲಿ ರೈತರ 100 ಟ್ರ್ಯಾಕ್ಟರ್‌ಗಳಿಂದ ತುಂಗಭದ್ರಾ ಜಲಾಶಯದಲ್ಲಿ ಸುಮಾರು 20 ಎಕರೆ 5 ಅಡಿ ಆಳದವರೆಗೆ ಹೂಳನ್ನು ಒಂದು ತಿಂಗಳ ಕಾಲ ತೆಗೆದು, ಸರ್ಕಾರದ ಗಮನಕ್ಕೆ ತರಲಾಗಿತ್ತು ಎಂದರು.

# ಪ್ರಧಾನ ಮಂತ್ರಿ ನರೇಂದ್ರ ಮೋದಿ ಬ್ರಾಹ್ಮಣರಾ?: ಸಿದ್ದುಗೆ ಛಲವಾದಿ ನಾರಾಯಣಸ್ವಾಮಿ ಪ್ರಶ್ನೆ



ಕಲಬುರಗಿ: ಅಹಿಂದ ಜಪ ಮಾಡುವ ಸಿದ್ದರಾಮಯ್ಯ ದೇಶದ ಪ್ರಧಾನಿ ಮೋದಿ ಅವರನ್ನು ನಿಂದಿಸುತ್ತಾರಲ್ಲಾ, ಪ್ರಧಾನಿ ಬ್ರಾಹ್ಮಣರೇನು? ಅವರು ಸಹ ಅಹಿಂದ ವರ್ಗಕ್ಕೆ ಸೇರಿದ ವರಲ್ಲವೇ? ಅಹಿಂದ ಎಲ್ಲವೂ ಬರೀ ತೋರಿಕೆ ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಸಿದ್ದರಾಮಯ್ಯ ಅವರಿಗೆ ಯಾವ ವ್ಯಕ್ತಿಯ ಮೇಲೂ ಗೌರವವಿಲ್ಲ. ಅಧಿಕಾರದ ಮದದಲ್ಲಿ ಯಾರಿಗೆ ಏನು ಬೇಕಾದರೂ ಮಾತನಾಡಬಹುದು ಎನ್ನುವುದು ಅವರ ನಿಲುವು. ಈ ವ್ಯವಸ್ಥೆ ಹೋಗಬೇಕು ಎಂದು ಜನ ಬಯಸಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಹೆಚ್ಚು ದಿನ ಇರಲ್ಲ, ಮುಂದಿನ ಬಾರಿ ಬಿಜೆಪಿ ಅಧಿಕಾರಕ್ಕೆ ಬರಲಿದೆ ಎಂದರು.

# ಬಳ್ಳಾರಿ ಜಿಲ್ಲಾಸ್ಪತ್ರೆ ಶವಾಗಾರದಲ್ಲಿ ಮೃತ ಮಹಿಳೆ ನಗ್ನ ಫೋಟೋ ಸೆರೆ: ಅಟೆಂಡರ್ ವಿರುದ್ಧ ಕೇಸ್ ದಾಖಲು

■ ಉದಯವಾಣಿ ಸಮಾಚಾರ

ಬೀದರ್: ನಗರದ ಬ್ರಿಮ್ಸ್ ಆಸ್ಪತ್ರೆಯಲ್ಲಿ ಮೃತ ಮಹಿಳೆಯ ನಗ್ನ ಫೋಟೋಗಳನ್ನು ಸಿಬ್ಬಂದಿಯೊಬ್ಬ ಸೆರೆ ಹಿಡಿದಿರುವ ನಾಗರಿಕ ಸಮಾಜ ತಲೆತಗ್ಗಿಸುವ ಘಟನೆಯೊಂದು ನಡೆದಿದ್ದು, ಸಿಬ್ಬಂದಿ ವಿರುದ್ಧ ಪ್ರಕರಣ ದಾಖಲಾಗಿದೆ. ಬ್ರಿಮ್ಸ್ ಆಸ್ಪತ್ರೆಯ ಶವಾಗಾರ ಕೋಣೆಯ ಅಟೆಂಡರ್ ಮುನೀರ್ ಅಹ್ಮದ್ ಆರೋಪಿ. ಇತ ಹಲವು ವರ್ಷಗಳಿಂದ ಬ್ರಿಮ್ಸ್‌ನಲ್ಲಿ ಕಾರ್ಯನಿರ್ವಹಿಸುತ್ತಿದ್ದ. ಮೃತ ಮಹಿಳೆಯರ ಮೈಮೇಲಿನ ಬಟ್ಟೆ ತೆಗೆದು ಮರಣೋತ್ತರ ಪರೀಕ್ಷೆ ಮಾಡುವಾಗ ಕಾನೂನು ಅನುಮತಿ ಇಲ್ಲದೆ ತನ್ನ ವೈಯಕ್ತಿಕ ಮೊಬೈಲ್‌ನಲ್ಲಿ ಮೃತ ಮಹಿಳೆಯರ ನಗ್ನ ಫೋಟೋಗಳನ್ನು ತೆಗೆದುಕೊಳ್ಳುತ್ತಿರುವುದು ಗಮನಕ್ಕೆ ಬಂದಿದೆ. ಈ ಕೃತ್ಯದಿಂದ ಮಹಿಳೆಯರ ಘನತೆ, ಕುಟುಂಬದವರ ಗೌರವಕ್ಕೆ ಹಾಗೂ ಆಸ್ಪತ್ರೆಯ ಗೌಪ್ಯತೆಗೆ ಧಕ್ಕೆಯಾಗಿದೆ ಎಂದು ಬ್ರಿಮ್ಸ್ ಪ್ರಿ.ಡಾ. ಮೋಸಿನ್ ಉಲ್‌ಹಕ್ ನೀಡಿದ ದೂರಿನ ಮೇಲೆ ನೂತನ ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.


## MANAPPURAM FINANCE LTD. — ಹರಾಜು ಪ್ರಕಟಣೆ

CIN : L65910KL1992PLC006623
Registered Office : W - 4/ 638A, Manappuram House,
P.O. Valapad, Thrissur - 680 567, Kerala, India

ಈ ಕೆಳಗಿನ ಶಾಖೆಗಳಲ್ಲಿ ಅಡವಿಟ್ಟಿರುವ ಚಿನ್ನಾಭರಣಗಳ ಸಾರ್ವಜನಿಕ ಹರಾಜನ್ನು 16/06/2026 ರಂದು ಬೆಳಿಗ್ಗೆ 10.00 ಗಂಟೆಯಿಂದ ಈ ಕೆಳಗಿನ ಶಾಖೆಗಳಲ್ಲಿ ನಡೆಸಲು ಉದ್ದೇಶಿಸಲಾಗಿದೆ ಎಂದು ಈ ಮೂಲಕ ವಿಶೇಷವಾಗಿ ಸಾಲಗಾರರಿಗೆ ಮತ್ತು ಸಾರ್ವಜನಿಕರಿಗೆ ತಿಳಿಸಲಾಗಿದೆ. ನೋಂದಾಯಿತ ಪತ್ರಗಳ ಮೂಲಕ ತಿಳಿಸಲಾಗಿದ್ದರೂ ಸಾಲದ ಮೊತ್ತವನ್ನು ಪಾವತಿಸಲು ವಿಫಲರಾದ ಸುಸ್ತಿದಾರ ಗ್ರಾಹಕರ ಚಿನ್ನದ ಆಭರಣಗಳನ್ನು ಹರಾಜು ಮಾಡಲಾಗುತ್ತದೆ. ಹರಾಜಾಗದ ವಸ್ತುಗಳನ್ನು ಯಾವುದೇ ಸೂಚನೆ ಇಲ್ಲದೆ ಬೇರೆ ಯಾವುದೇ ದಿನಗಳಲ್ಲಿ ಹರಾಜು ಮಾಡಲಾಗುವುದು. ಹರಾಜಿನ ದಿನಾಂಕದಂದು ಚಿನ್ನದ ಮಾರುಕಟ್ಟೆ ಬೆಲೆ ಅಥವಾ ಸರಾಸರಿ 30 ದಿನಗಳ IBJA ದರದ 85%, ಯಾವುದು ಹೆಚ್ಚೋ ಅದರ ಆಧಾರದ ಮೇಲೆ ಮೀಸಲು ಬೆಲೆಯನ್ನು ನಿಗದಿಪಡಿಸಲಾಗುತ್ತದೆ. ಸ್ಥಳ ಅಥವಾ ದಿನಾಂಕದಲ್ಲಿನ ಬದಲಾವಣೆಯನ್ನು (ಯಾವುದಾದರೂ ಇದ್ದರೆ) ಹರಾಜು ಕೇಂದ್ರದಲ್ಲಿ ಮತ್ತು ಕಂಪನಿಯ ವೆಬ್‌ಸೈಟ್‌ನಲ್ಲಿ ಪ್ರದರ್ಶಿಸಲಾಗುತ್ತದೆ. ಕೆಳಗೆ ನೀಡಲಾದ ವಿವರಗಳು ಶಾಖೆಯ ಹೆಸರು, ಸಾಲದ ಸಂಖ್ಯೆ, ಗ್ರಾಹಕರ ಹೆಸರು, ಒಟ್ಟು ಬಾಕಿ ಮೊತ್ತ ('ಸಲ್ಲಿ) ಐಟಂ ಹೆಸರಿನ ಕ್ರಮದಲ್ಲಿದೆ

ಅಡವುಗಳ ಪಟ್ಟಿ :

[illegible]

ಮೇಲಿನ ಹರಾಜಿನಲ್ಲಿ ಭಾಗವಹಿಸಲು ಬಯಸುವ ವ್ಯಕ್ತಿಗಳು ಈ ಮುಂದೆ ತಿಳಿಸಿರುವುದನ್ನು ಅನುಸರಿಸಬೇಕು:- ಆಸಕ್ತಿಯುಳ್ಳ ಸವಾಲು ಕೂಗುವವರು (ಬಿಡ್ಡರ್ ಗಳು) ಎನ್‌ಇಎಫ್‌ಟಿ/ಆರ್‌ಟಿಜಿಎಸ್ ವಿಧಾನದ ಮೂಲಕ ರೂ.10,000/ ಅನ್ನು ಇಎಂಡಿ (ವಿಫಲಗೊಂಡ ಸವಾಲು ಕೂಗುವವರಿಗೆ ಮರುಪಾವತಿಯಾಗುವಂಥದ್ದು) ಆಗಿ ಹರಾಜಿನ ದಿನದಂದೇ ಸಲ್ಲಿಸಬೇಕು. ಸವಾಲು ಕೂಗುವವರು ಮಾನ್ಯವಾದ ಪಾನ್ ಕಾರ್ಡ್ /ಪ್ಯಾನ್ ಕಾರ್ಡ್ ಇಟ್ಟುಕೊಂಡಿರಬೇಕು. ಹೆಚ್ಚಿನ ವಿವರಗಳಿಗಾಗಿ ದಯವಿಟ್ಟು 9072607147 ಅನ್ನು ಸಂಪರ್ಕಿಸಿ.

ಅಧಿಕೃತ ಅಧಿಕಾರಿ,
ಮಣಪ್ಪುರಂ ಫೈನಾನ್ಸ್ ಲಿ. ಪರವಾಗಿ